ಕನ್ನಡ ಪೋಸ್ಟ್
KANNADA POST
ಇದು ಸುದ್ದಿ ವಿಲಾಸ
ಸಂಪಾದಕ : ಮಂಜು ಬನವಾಸೆ
ಕನ್ನಡ ದಿನಪತ್ರಿಕೆ
ಹಾಸನ E-mail : kannadapostnews@gmail.com / ಕನ್ನಡ post Price: ₹1
Vol.No.01 | Issue. 293 | Pages. 2 | Date: 14-10-2025, TUESDAY RNI NO: KARKAN/2024/89601 Kannada Daily
ಸಂಪುಟ : 01 – ಸಂಚಿಕೆ : 293 – ಪುಟಗಳು : 2 14-10-2025 ಮಂಗಳವಾರ Ph: 8762954248 ದರ : ₹1

# ಧರ್ಮ ದರ್ಶನದಲ್ಲಿ ಡಿಸಿ ಹಾಸನಾಂಬ ದರ್ಶನ

## ಸಾರ್ವಜನಿಕರ ಕಷ್ಟ ಅರಿತ ಜಿಲ್ಲಾಧಿಕಾರಿ | ಗರ್ಭಗುಡಿಯಲ್ಲಿ ಭಕ್ತರನ್ನು ತಳ್ಳಬೇಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಕ್ತಿ ದೇವತೆ ಹಾಸನಾಂಬ ದರ್ಶನೋತ್ಸವ ಸುಗಮವಾಗಿ ನಡೆಯುತ್ತಿದ್ದು ಸೋಮವಾರ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಇತರ ಅಧಿಕಾರಿಗಳೊಂದಿಗೆ ಸುಮಾರು ಎರಡು ತಾಸು ಸಾರ್ವಜನಿಕರೊಟ್ಟಿಗೆ ಧರ್ಮ ದರ್ಶನ ಸಾಲಿನಲ್ಲಿ ಬಂದು ದೇವಿ ದರ್ಶನ ಪಡೆದರು.



ಸರತಿ ಸಾಲಿನಲ್ಲಿ ಸಾಗುತ್ತಿದ್ದ ಜಿಲ್ಲಾಧಿಕಾರಿ ಕೆಲವು ಕಡೆ ಕಬ್ಬಿಣದ ರಾಡ್‌ಗಳು ಕಾಲಿಗೆ ತಗಲುತ್ತಿದುದನ್ನುಗಮನಿಸಿ ಅವುಗಳಿಗೆ ಬಟ್ಟೆ ಕಟ್ಟಿ ಸರಿಪಡಿಸಲು ಸೂಚಿಸಿದರು. ಸಾರ್ವಜನಿಕರು ತಿಂಡಿ ತಿನಿಸುಗಳನ್ನುತಿಂದು ಅಲ್ಲಲ್ಲಿಯೇ ಹಾಕಿದ್ದ ಖಾಲಿ ಪ್ಲಾಸ್ಟಿಕ್ ಕವರ್, ಕುಡಿಯುವ ನೀರಿನ ಬಾಟಲ್ ಮತ್ತು ಹಣ್ಣಿನ ಸಿಪ್ಪೆಯನ್ನು ಸ್ವಚ್ಛಗೊಳಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸರತಿ ಸಾಲಿನಲ್ಲಿ ಸಾಗುತ್ತಿದ್ದ ಭಕ್ತಾದಿಗಳು ಈ ಬಾರಿ ದೇವಿ ದರ್ಶನಕ್ಕೆ ವ್ಯವಸ್ಥೆ ತುಂಬಾ ಅಚ್ಚುಕಟ್ಟಾಗಿ ಮಾಡಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸೆಲ್ಫಿ ತೆಗೆದುಕೊಳ್ಳಲು ಮುಗಿಬೀಳುತ್ತಿದ್ದುದು ಕಂಡುಬಂದಿತು.

ದೇವಿ ದರ್ಶನ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಬೆಳಿಗ್ಗೆ 10.30 ಗಂಟೆಗೆ ಕುಟುಂಬ ಸಮೇತರಾಗಿ ವಿವಿಧ ಹಿರಿಯ ಅಧಿಕಾರಿಗಳ ಜೊತೆಗೆ ಧರ್ಮ ದರ್ಶನವನ್ನು ಆರಂಭಿಸಿದೆವು. ಆ ಸಂದರ್ಭದಲ್ಲಿ ಮುಖ್ಯವಾಗಿ ಕಂಡುಬಂದಂತಹ ನ್ಯೂನ್ಯತೆಗಳೆಂದರೆ ಬ್ಯಾರಿಕೇಡ್ ಕಂಬಿಗಳು ಕಾಲಿಗೆ ತಾಗುತ್ತಿತ್ತು. ಈ ಹಿಂದೆ ಅದನ್ನು ಸರಿಪಡಿಸಲು ಪ್ರಯತ್ನ ಮಾಡಲಾಗಿತ್ತು. ಆದರೂ ಕೆಲವು ಕಡೆ ಕಬ್ಬಿಣದ ರಾಡ್‌ಗೆ ಸುತ್ತಿದ್ದ ಬಟ್ಟೆ ಕಳಚಿಹೋಗಿ ಕಾಲಿಗೆ ತಾಕುತ್ತಿರುವುದನ್ನು ಗಮನಿಸಿ ಸರಿಪಡಿಸಲಾಯಿತು ಎಂದು ತಿಳಿಸಿದರು.

## ನನ್ನನ್ನು ತಳ್ಳಿಬಿಟ್ಟರು

ದೇವಿ ದರ್ಶನದ ಸಂದರ್ಭದಲ್ಲಿ ತಾವು ಜಿಲ್ಲಾಧಿಕಾರಿ ಎನ್ನುವುದನ್ನು ತಿಳಿಯದೆ ನಮ್ಮನ್ನು ಸಹ ಮುಂದೆ ತಳ್ಳಿದರು ನಮಗೂ ಒಂದು ಸೆಕೆಂಡ್ ದರ್ಶನ ದೊರೆಯಿತು. 2-3 ಗಂಟೆಗಳ ಕಾಲ ಸರತಿ ಸಾಲಿನಲ್ಲಿ ಬಂದು ದರ್ಶನ ಪಡೆಯುವವರಿಗೆ ಇದರಿಂದ ಸ್ವಲ್ಪ ಅಸಮಾಧಾನ ಉಂಟಾಗುತ್ತದೆ ಎಂಬುದು ಅರಿವಾಯಿತು. ಈಗಾಗಲೇ ಸಚಿವರು ಕೂಡಾ ಕನಿಷ್ಠ 5 ಸೆಕೆಂಡಾದರೂ ದರ್ಶನಕ್ಕೆ ಸಮಯವನ್ನು ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ ಎಂದು ತಿಳಿಸಿದರು.

ಮಹಿಳೆಯರಿಗೆ ಅದರಲ್ಲೂ ಹಿರಿಯ ನಾಗರಿಕರಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಬೇಕು. ಈ ನಿಟ್ಟಿನಲ್ಲಿ ಪ್ರಯತ್ನಿಸುವುದಾಗಿ ತಿಳಿಸಿದರು.

ನಾವು ದೇವಿ ದರ್ಶನಕ್ಕೆ ಸರತಿ ಸಾಲಿನಲ್ಲಿ ಬರುತ್ತಿರುವ ಸಂದರ್ಭದಲ್ಲಿ ಬಾಗಿಲನ್ನು ಮುಚ್ಚುವ ಸಾಧ್ಯತೆಗಳು ಹೆಚ್ಚಿದ್ದವು ಎಂದು ಮಾಹಿತಿ ದೊರೆಯಿತು. ಅಧಿಕಾರಿಗಳು ಸರತಿ ಸಾಲು ಮೊಟಕುಗೊಳಿಸಿ ಬಂದು ದರ್ಶನ ಪಡೆಯಿರಿ ಎಂದು ಸಲಹೆ ನೀಡಿದರು. ಆದರೆ ನಾನು ದರ್ಶನ ದೊರೆತರು, ದೊರೆಯದಿದ್ದರೂ ಇದೇ ಸಾಲಿನಲ್ಲಿ ಮುಂದುವರೆದು ದರ್ಶನ ಮಾಡಿಯೇ ಹೊರಡುತ್ತೇನೆಂದು ನಿರ್ಧಾರ ಮಾಡಿದ್ದೆ. ಹೇಗೋ ಎರಡು ಗಂಟೆಯೊಳಗೆ ದರ್ಶನವಾಯಿತು ಎಂದು ತಿಳಿಸಿದರು. ಸಾಮಾನ್ಯ ಭಕ್ತರ ಕಷ್ಟಗಳು ಅವರ ಅವಶ್ಯಕತೆಗಳು ಏನು ಎಂದು ತಿಳಿಯಬೇಕೆಂದರೆ ಅವರ ಜೊತೆಯಲ್ಲಿ ಸರದಿಯಲ್ಲಿ ನಿಲ್ಲುವುದರಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## ನಾಳೆ ಸಿದ್ದರಾಮಯ್ಯ ಆಗಮನ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅ. 15ರ ಬುಧವಾರ ಹಾಸನಾಂಬ ಹಾಗು ಸಿದ್ದೇಶ್ವರಸ್ವಾಮಿ ದರ್ಶನಕ್ಕೆ ಬರಲಿದ್ದಾರೆ. ಬೆಳಿಗ್ಗೆ 11 ಗಂಟೆಗೆ ಹೆಲಿಕಾಪ್ಟರ್ ಮೂಲಕ ಬೂವನಹಳ್ಳಿ ಹೆಲಿಪ್ಯಾಡ್‌ಗೆ ಬರಲಿರುವ ಅವರು ಹಾಸನಾಂಬ ದರ್ಶನ ಪಡೆಯುವರು. ನಂತರ ಮೈಸೂರಿಗೆ ಪ್ರಯಾಣಿಸಲಿದ್ದಾರೆ.

## ಅ.17 ರಂದು ಫಲಪುಷ್ಪ ಪ್ರದರ್ಶನ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತೋಟಗಾರಿಕೆ ಇಲಾಖೆ, ಹೇಮಾವತಿ ತೊಟಗಾರಿಕೆ ಸಂಘದಿಂದ ಹಾಸನಾಂಬ ಮತ್ತು ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಅ.17 ರಿಂದ ಅ.20 ರವರೆಗೆ ಸಿಲ್ವರ್ ಜ್ಯುಬಿಲಿ ಪಾರ್ಕ್‌ನಲ್ಲಿ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ಅ.17 ರಂದು ಬೆಳಿಗ್ಗೆ 11 ಗಂಟೆಗೆ ಉದ್ಘಾಟನೆ ನೆರವೇರಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಫಲಪುಷ್ಪ ಪ್ರದರ್ಶನ ಉದ್ಘಾಟನೆ ಮಾಡಲಿದ್ದಾರೆ. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಭಾಗವಹಿಸಲಿದ್ದು ಶಾಸಕ ಹೆಚ್.ಪಿ. ಸ್ವರೂಪ್ ಅಧ್ಯಕ್ಷತೆ ವಹಿಸುವರು.

## ವಯಸ್ಕರಿಗೆ ಪ್ರತ್ಯೇಕ ಸಾಲು

ಮಹಿಳಾ ಭಕ್ತಾದಿಗಳು ಅದರಲ್ಲೂ 65 ವರ್ಷ 72 ವರ್ಷದವರು ಮಂಡಿ ನೋವು ಇನ್ನಿತರ ಸಮಸ್ಯೆಗಳಿವೆ ಕಂಬಿಯನ್ನು ಸುತ್ತು ಹಾಕಿಕೊಂಡು ಹೋಗಲು ಸಾಧ್ಯವಿಲ್ಲ. ಹಾಗಾಗಿ ನಮಗಾಗಿ ಪ್ರತ್ಯೇಕ ಸರತಿ ಸಾಲನ್ನು ಮಾಡಿ ಎಂದು ಕೇಳಿಕೊಂಡರು. ನಿಜವಾಗಲೂ ಧರ್ಮದರ್ಶನದ ಸಾಲಿನಲ್ಲಿ ನಾವು ಬಂದಿದ್ದು ಸಾರ್ಥಕವಾಯಿತು ಎಂದೆನಿಸಿತು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## ಚಿಗಳ್ಳಿಯಲ್ಲಿ ಗಣಿಗಾರಿಕೆ ತಡೆಗೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ಚಿಗಳ್ಳಿ ಗ್ರಾಮದಲ್ಲಿ ಅನಧಿಕೃತ ಗಣಿಗಾರಿಕೆ ನಡೆಯುತ್ತಿದ್ದು ಅದಕ್ಕೆ ಕಡಿವಾಣ ಹಾಕಬೇಕು ಎಂದು ಎಎಪಿ ಮುಖಂಡ ಶಿವಕುಮಾರ್ ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಸರ್ವೆ ನಂ. 38, 56ರಲ್ಲಿ ಗಣಿಗಾರಿಕೆ ನಡೆಯುತ್ತಿದೆ. ಈ ಜಾಗ ಹೇಮಾವತಿ ಭೂ ಸಂತ್ರಸ್ತರಿಗೆ ಮೀಸಲಿದ್ದರೂ ಅಕ್ರಮ ಗಣಿಗಾರಿಕೆಗೆ ಅವಕಾಶ ಮಾಡಿಕೊಟ್ಟಿರುವುದು ಅಧಿಕಾರಿಗಳ ಕರ್ತವ್ಯ ಲೋಪಕ್ಕೆ ನಿದರ್ಶನ ಎಂದರು.

ಗ್ರಾಮದ ರವಿಕುಮಾರ್ ಮಾತನಾಡಿ, ಕಲ್ಲು ಗಣಿಗಾರಿಕೆ, ಕ್ರಷರ್ಸ್ ನಡೆಸುತ್ತಿರುವವರು ನಿಯಮ ಪಾಲಿಸುತ್ತಿಲ್ಲ. ಬೃಹತ್ ಬಂಡೆಗಳ ಒಡೆಯಲು ಸಿಡಿಮದ್ದು ಬಳಸುತ್ತಿರುವುದರಿಂದ ಗ್ರಾಮದಲ್ಲಿ ಅನಾರೋಗ್ಯ ಪ್ರಕರಣಗಳು ಹೆಚ್ಚುತ್ತಿವೆ. ಅಕ್ಕ ಪಕ್ಕದ ಜಮೀನುಗಳಲ್ಲಿ ಬೆಳೆ ಬೆಳೆಯಲು ಸಾಧ್ಯವಾಗುತ್ತಿಲ್ಲ. ಅಧಿಕಾರಿಗಳು ಲಂಚಕ್ಕೆ ದಾಸರಾಗಿ ಕಣ್ಣಿದ್ದೂ ಕುರುಡರಾಗಿದ್ದಾರೆಂದು ದೂರಿದರು.

ನಿಯಮ ಉಲ್ಲಂಘನೆ ಮಾಡಿರುವವರ ವಿರುದ್ಧ ಕ್ರಮ ಕೈಗೊಳ್ಳಿ ಎಂದರೆ ತಹಶೀಲ್ದಾರ್ ರಾತ್ರಿ ವೇಳೆ ಪರಿಶೀಲನೆಗೆ ಬರುತ್ತಾರೆ. ಈ ಬಗ್ಗೆ ಕೇಳಲು ಹೋದರೆ ನಮ್ಮ ಮೇಲೆಯೇ ಹಲ್ಲೆ ಮಾಡಲು ಬರುತ್ತಾರೆಂದರು.

ಈ ಸಂಬಂಧ ಹೈಕೋರ್ಟ್‌ನಲ್ಲಿ ಕೇಸ್ ಇದ್ದರೂ, ಅದಕ್ಕೆ ಯಾರೂ ಕ್ಯಾರೇ ಎನ್ನುತ್ತಿಲ್ಲ. ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಟಿಯಲ್ಲಿ ವರಜರಾಜು, ಮಹೇಶ್, ಕಾಂತ, ರಘು ಇದ್ದರು.

## ಹಾಸನಾಂಬ ದರ್ಶನ ಪಡೆದ ಮಾಜಿ ಸಚಿವ ರೇವಣ್ಣ ಕುಟುಂಬ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಕ್ತಿ ದೇವತೆ ಹಾಸನಾಂಬ ದರ್ಶನಕ್ಕೆ ಸೋಮವಾರವು ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದರು.

ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಪತ್ನಿ ಭವಾನಿ ರೇವಣ್ಣ, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ 1 ಸಾವಿರ ರೂ. ಟಿಕೆಟ್ ಪಡೆದು ಹಾಸನಾಂಬ ದೇವಿ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ಚಿತ್ರನಟಿ ತಾರಾ, ಮಾಜಿ ಸದಸ್ಯ ವೈ.ಎಸ್.ವಿ. ದತ್ತಾ ಹಾಗೂ ಇತರರು ದೇವಿ ದರ್ಶನ ಪಡೆದರು

ರೇವಣ್ಣ ಅವರನ್ನು ತಡೆದ ಸಿಬ್ಬಂದಿ:

ವಿಶೇಷ ಭದ್ರತೆ ಹೊಂದಿರುವ ರೇವಣ್ಣ ಅವರು ತಮ್ಮದೇ ಕಾರಿನಲ್ಲಿ ಭದ್ರತಾ ವ್ಯವಸ್ಥೆಯೊಂದಿಗೆ ದೇವಿ ದರ್ಶನಕ್ಕೆ ಆಗಮಿಸಿದ್ದರು. ಈ ವೇಳೆ ಅವರ ಕಾರನ್ನು ತಡೆದ ಕಂದಾಯ ಇಲಾಖೆ ಅಧಿಕಾರಿಗಳ ವಿರುದ್ಧ ರೇವಣ್ಣ ಅಸಮಾಧಾನ ವ್ಯಕ್ತಪಡಿಸಿದರು. ಪತ್ನಿ ಭವಾನಿ ರೇವಣ್ಣ ಜೊತೆ ಸಾವಿರ ರೂ. ಟಿಕೆಟ್ ಪಡೆದು ಮಹಾನಗರ ಪಾಲಿಕೆ ಮುಂಭಾಗದ ಪ್ರವೇಶ ದ್ವಾರದಿಂದ ದೇಗುಲದವರೆಗೂ ನಡೆದುಕೊಂಡೇ ದೇಗುಲಕ್ಕೆ ಆಗಮಿಸಿದರು.



ಪತ್ನಿ ಭವಾನಿ ರೇವಣ್ಣ ಜೊತೆ ಸಾವಿರ ರೂ. ಟಿಕೆಟ್ ಪಡೆದು ನೇರ ದರ್ಶನಕ್ಕೆ ರೇವಣ್ಣ ಆಗಮಿಸಿದ್ದರು.

ಬಳಿಕ ಅರ್ಧ ಗಂಟೆಗೂ ಹೆಚ್ಚು ಕಾಲ ವಿಶೇಷ ಪೂಜೆ ಸಲ್ಲಿಸಿದರು. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಚೆನ್ನಮ್ಮ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಅನಿತಾ ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ, ಸೂರಜ್ ರೇವಣ್ಣ, ಪ್ರಜ್ವಲ್ ರೇವಣ್ಣ ಸೇರಿ ಕುಟುಂಬ ಸದಸ್ಯರ ಹೆಸರಿನಲ್ಲಿ ಅರ್ಚನೆ ಮಾಡಿಸಿದರು.

ದರ್ಶನದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಹೆಚ್.ಡಿ.ರೇವಣ್ಣ ಅವರು, ನಾನು 1 ಸಾವಿರ ರೂ.ಮೊತ್ತದ 5 ಟಿಕೆಟ್ ಖರೀದಿಸಿ ಬಂದು ದೇವಿಯ ದರ್ಶನಕ್ಕೆ ಆಗಮಿಸಿದ್ದೇನೆ. ಜಿಲ್ಲೆ ಮತ್ತು ರಾಜ್ಯದ ಜನತೆಗೆ ಒಳಿತಾಗಲಿ. ಒಳ್ಳೆಯ ಮಳೆ, ಬೆಳೆ ಆಗಿ ಜನರು ಸಮೃದ್ಧಿಯಾಗಿರಲಿ ಎಂದು ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದರು.

ಹೆಚ್.ಡಿ.ದೇವೇಗೌಡರ ಆರೋಗ್ಯದ ಬಗ್ಗೆ ತಾಯಿ ಇದ್ದಾರೆ, ಅವರು ರಕ್ಷಣೆ ನೀಡುತ್ತಾರೆ. ದೇವೇಗೌಡರಿಗೆ, ನನಗೆ ಕುಮಾರಸ್ವಾಮಿಗೆ ತಾಯಿ ಅನುಗ್ರಹ ಇದೆ ಜೊತೆಗೆ ಲಕ್ಷ್ಮೀ ನರಸಿಂಹ, ರಂಗನಾಥಸ್ವಾಮಿ, ವೆಂಕಟೇಶ್ವರ ಸ್ವಾಮಿ ಎಲ್ಲಾ ಇದ್ದಾರೆ ಎಂದು ಉತ್ತರಿಸಿದರು.

ಭವಾನಿ ರೇವಣ್ಣ ಮಾತನಾಡಿ, ಹಾಸನಾಂಬೆ ದೇವಿ ದರ್ಶನ ಪಡೆದು ಎಲ್ಲರಿಗೂ ಒಳ್ಳೆಯದು ಮಾಡಲಿ ಎಂದು ದೇವರಲ್ಲಿ ಕೇಳಿಕೊಂಡಿದ್ದೇನೆ. ವಿಶೇಷವಾಗಿ ಬೇಡಿಕೊಂಡಿದ್ದೇನೆ, ಅದನ್ನೆಲ್ಲ ಹೇಳಿಕೊಳ್ಳಲು ಆಗುವುದಿಲ್ಲ. ದೇವೇಗೌಡರು ಚೇತರಿಸಿಕೊಂಡು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ದೇವೇಗೌಡರ ಆರೋಗ್ಯದ ಬಗ್ಗೆ ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದರು.

## ನಿಷೇಧ ಪ್ರಸ್ತಾಪ ಮೂರ್ಖತನದ ಪರಮಾವಧಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಾಷ್ಟ್ರೀಯ ಸ್ವಯಂ ಸೇವಕ ಸಂಘದ (ಆರ್ ಎಸ್‌ಎಸ್) ಹಿನ್ನೆಲೆ ಸಮಾಜ ಸೇವಾ ಚಟುವಟಿಕೆಗಳ ಮಾಹಿತಿ ಕೊರತೆ ಇರುವವರು ಪುಕ್ಕಟೆ ಪ್ರಚಾರಕ್ಕಾಗಿ ಬಾಯಿಗೆ ಬಂದಂತೆ ಮಾತನಾಡುತ್ತಾರೆ ಎಂದು ಬಿಜೆಪಿ ರಾಜ್ಯ ಎಸ್‌ಸಿ ಮೋರ್ಚಾ ರಾಜ್ಯಾಧ್ಯಕ್ಷ ಸಿಮೆಂಟ್ ಮಂಜು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆಗೆ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಭಾನುವಾರ ಮಾತನಾಡಿ, ರಾಷ್ಟ್ರೀಯ ಸ್ವಯಂ ಸೇವಕ ಸಂಘ ದೇಶ ಸೇವೆ ನಿರಂತವಾಗಿ ಮಾಡುತ್ತ ನೂರು ವರ್ಷ ಪೂರೈಸಿದೆ. ಸರ್ಕಾರಿ ಸ್ಥಳಗಳಲ್ಲಿ ನಡೆಸುವ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶಾಖೆ, ಪಥಸಂಚಲನ, ಬೈಠಕ್‌ಗಳನ್ನು ನಿಷೇಧಿಸಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಜಗತ್ತಿನ ಅತ್ಯಂತ ದೊಡ್ಡ ಸ್ವಯಂ ಸೇವಕರ ಪಡೆ ಹೊಂದಿರುವ ಆರ್‌ಎಸ್‌ಎಸ್ ನಿಷೇಧಕ್ಕೆ ಕರೆ ಕೊಟ್ಟಿರುವುದು ಮುರ್ಖತನದ ಪರಮಾವಧಿ ಎಂದರು.

ಪ್ರಕೃತಿ ವಿಕೋಪ, ರೈಲು ದುರಂತ, ಕೋವಿಡ್, ಅಪಘಾತ, ಭೂಕಂಪ, ನೆರೆ ಸಂದರ್ಭದಲ್ಲಿ ನೊಂದವರಿಗೆ ಮೊದಲು ಆಸರೆಯಾಗುವುದು ರಾಷ್ಟ್ರೀಯ ಸ್ವಯಂ ಸೇವಕ ಸಂಘ. ಸೇವಾತತ್ಪರತೆ, ಸಮಾಜ ಸೇವೆ, ರಾಷ್ಟ್ರಪ್ರೇಮದ ಬಗ್ಗೆ ಜಾಗೃತಿ, ಶಿಸ್ತಿಗೆ ಮತ್ತೊಂದು ಹೆಸರೇ ಆರ್‌ಎಸ್‌ಎಸ್. ಯಾವ ಪ್ರತಿಫಲಾಪೇಕ್ಷೆ ಇಲ್ಲದೇ ನಿಸ್ವಾರ್ಥ ಸೇವೆ ಸಲ್ಲಿಸುವ ಪ್ರಪಂಚದ ಏಕೈಕ ಸಂಘಟನೆಯಾಗಿದೆ. ಸಂಘವನ್ನು ನಿಷೇಧ ಮಾಡಲು ಯಾರಿಂದಲೂ ಸಾಧ್ಯವಿಲ್ಲ. ವಿರೋಧಿಗಳು ಪ್ರೀತಿಸುವ, ಗೌರವಿಸುವ ಜಗತ್ತಿನ ಏಕೈಕ ಸಂಘಟನೆಯೇ ಆರ್‌ಎಸ್‌ಎಸ್. ರಾಜಕೀಯ ಪ್ರೇರಿತ ಹೇಳಿಕೆಗಳನ್ನು ಕೊಡುವುದನ್ನು ಬಿಟ್ಟು ಸಚಿವರಾಗಿ ರಾಜ್ಯದ ಅಭಿವೃದ್ಧಿ ಕಡೆ ಗಮನ ಕೊಡಲಿ ಎಂದು ಸಲಹೆ ನೀಡಿದರು.

## ಅತಿವೃಷ್ಟಿ ಪರಿಹಾರ ವಿತರಣೆಗೆ ವಿಳಂಬ ಬೇಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಉತ್ತರ ಕರ್ನಾಟಕದ ಕಲಬುರಗಿ, ಯಾದಗಿರಿ, ವಿಜಯಪುರ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಿ ಅಪಾರ ನಷ್ಟವುಂಟಾಗಿದೆ. ರಾಜ್ಯ ಸರ್ಕಾರ ಎನ್‌ಡಿಆರ್‌ಎಫ್ ಪರಿಹಾರ ಬರುವ ವರೆಗೆ ಕಾಯದೆ ತಕ್ಷಣ ತನ್ನ ಪಾಲಿನ ಜವಾಬ್ದಾರಿ ನಿರ್ವಹಿಸಬೇಕು ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಪರಿಹಾರ ಹಂಚಿಕೆ ವಿಚಾರದಲ್ಲಿ ಕೇಂದ್ರದಿಂದ ಬರುವ ವರೆಗೆ ಕೊಡದೆ ರಾಜ್ಯ ಸರ್ಕಾರ ಸತಾಯಿಸುತ್ತದೆ. 2023ರಲ್ಲಿ ಉಂಟಾದ ಅನಾವೃಷ್ಟಿಯಿಂದ 36 ಸಾವಿರ ಕೋಟಿ ರೂ. ನಷ್ಟವಾಗಿದೆಯೆಂದು ಘೋಷಿಸಿದರು. ಕೇಂದ್ರದಿಂದ 400 ಕೋಟಿ ರೂ. ಹಾಗೂ ರಾಜ್ಯ




ಸರ್ಕಾರದಿಂದ ಕೇವಲ 200 ಕೋಟಿ ರೂ. ಪರಿಹಾರ ಬಿಡುಗಡೆ ಆಯಿತು. ಹೀಗಾದರೆ ಅನ್ನದಾತರು ಬದುಕುವುದು ಹೇಗೆಂದು ಪ್ರಶ್ನಿಸಿದರು.

ಈ ಬಾರಿ ತಾರತಮ್ಯ ಮಾಡದೆ ನಷ್ಟದ ಪ್ರಮಾಣ ಅಂದಾಜಿಸಿ ಸರ್ವಸಮ್ಮತ ಪರಿಹಾರ ನೀಡಬೇಕು. ಉಭಯ ಸರ್ಕಾರಗಳು ಎಚ್ಚರಿಕೆಯಿಂದ ನಿಭಾಯಿಸಬೇಕು ಎಂದು ಮನವಿ ಮಾಡಿದರು.

ಶರಾವತಿ ಹಿನ್ನೀರಿನಲ್ಲಿ ಪಂಪ್ ಸ್ಟೋರೇಜ್ ಮೂಲಕ ವಿದ್ಯುತ್ ಉತ್ಪಾದನಾ ಯೋಜನೆಗೆ ಆಸಕ್ತಿ ತೋರುವ ರಾಜ್ಯ ಸರ್ಕಾರ ಮಹದಾಯಿ ಯೋಜನೆ ಅನುಷ್ಠಾನಕ್ಕೆ ನಿರಾಸಕ್ತಿ ತೋರುತ್ತಿರುವುದೇಕೆ ಎಂದು ಪ್ರಶ್ನಿಸಿದರು.

ಮಹಾದಾಯಿ ಯೋಜನೆ ಅನುಷ್ಠಾನ ಸಂಬಂಧ ಅರಣ್ಯ ಇಲಾಖೆ, ಮಾಲಿನ್ಯ ಇಲಾಖೆ ಅನುಮತಿ ಕೊಟ್ಟಿಲ್ಲ ಎನ್ನುತ್ತಾರೆ. ಅದೇ ಶರಾವತಿ ಯೋಜನೆಗೆ ಅನುಮತಿ ಪಡೆಯುತ್ತಾರೆ. ಆ ಕಾಮಗಾರಿಯನ್ನು ಖಾಸಗಿ ವ್ಯಕ್ತಿಗೆ ನೀಡಿದ್ದಾರೆ.

ಅಲ್ಲಿ ಆಗುವ ಆರ್ಥಿಕ ಲಾಭ ಮಹದಾಯಿ ಯೋಜನೆಯಿಂದ ಆಗುವುದಿಲ್ಲವೆಂಬ ಕಾರಣಕ್ಕೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆಂದು ಆರೋಪಿಸಿದರು.

ತಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ಮೇಕೆದಾಟು ಅಣೆಕಟ್ಟು ನಿರ್ಮಿಸುತ್ತೇವೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶಪಥ ಮಾಡಿದ್ದರು. ಸಿದ್ದರಾಮಯ್ಯ ಸೇರಿ ಕಾಂಗ್ರೆಸ್‌ನ ಘಟಾನುಘಟಿ ನಾಯಕರು ಪಾದಯಾತ್ರೆ ನಡೆಸಿದ್ದರು. ಅಧಿಕಾರಕ್ಕೆ ಬಂದು ಎರಡೂವರೆ ವರ್ಷವಾದರೂ ಆ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಂಡಿಲ್ಲ. ಯಾವ ರಾಜಕಾರಣಿಗಳು ಚುನಾವಣಾ ಪೂರ್ವ ನೀಡಿದ ಹೇಳಿಕೆಗೆ ಬದ್ಧರಾಗಿರುವುದಿಲ್ಲ. ಓಟಿನ ಆಸೆಗೆ ಜನರಿಗೆ ಆಸೆ ಹುಟ್ಟಿಸುತ್ತಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಟಿಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು, ರಾಜ್ಯ ಮುಖಂಡ ಮಹಮದ್ ಸಾದಿಕ್, ಕಾರ್ಮಿಕ ವಿಭಾಗದ ಅರುಣ್ ಕುಮಾರ್, ತಾಲ್ಲೂಕು ಮುಖಂಡರಾದ ಹರಿಹರನ್, ಚೇತನ ಇದ್ದರು.

## ಸಕಲೇಶಪುರ ಇನ್‌ಸ್ಪೆಕ್ಟರ್ ಜಗದೀಶ್‌ಗೆ ಬೀಳ್ಕೊಡುಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ನಗರ ಠಾಣೆ ಪೋಲಿಸ್ ಇನ್‌ಸ್ಪೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿದ್ದ ಜಗದೀಶ್ ಅವರು ವರ್ಗಾವಣೆಯಾದ ಹಿನ್ನೆಲೆಯಲ್ಲಿ ಸಿಬ್ಬಂದಿ ಆತ್ಮೀಯ ಬೀಳ್ಕೊಡುಗೆ ನೀಡಿದರು.

2 ವರ್ಷ ಸಕಲೇಶಪುರ ನಗರ ಠಾಣೆಯಲ್ಲಿ ಸೇವೆ ಸಲ್ಲಿಸಿದ್ದ ಅವರು ಅಕ್ರಮ ಮರಳುಗಾರಿಕೆಗೆ ಸಂಪೂರ್ಣವಾಗಿ ತಡೆಒಡ್ಡಿದ್ದಲ್ಲದೆ ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರಿಂದ ಸುಮಾರು 70 ಲಕ್ಷ ರೂ. ದಂಡ ಸಂಗ್ರಹಿಸಿ ಸರ್ಕಾರಕ್ಕೆ ಆದಾಯ ಬರುವಂತೆ ಮಾಡಿದ್ದರು. ಪಟ್ಟಣದಲ್ಲಿ ಗಲಭೆಗಳು ಉಂಟಾಗದಂತೆ ಬಿಗಿ ಕ್ರಮ ಕೈಗೊಂಡಿದ್ದರು. ಇದೀಗ ಚಾಮರಾಜನಗರ ನಗರ ಠಾಣೆಗೆ ವರ್ಗಾವಣೆಗೊಂಡಿದ್ದು ನೂತನ ಇನ್‌ಸ್ಪೆಕ್ಟರ್ ವನರಾಜ್ ಅವರಿಗೆ ಅಧಿಕಾರ ಹಸ್ತಾಂತರ ಮಾಡಿದರು.



## ಪ್ಲಾಸ್ಟಿಕ್ ಬಳಕೆ ನಿಷೇಧ ಕಾನೂನು ಬದಲಾಗಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪ್ಲಾಸ್ಟಿಕ್ ಬಳಕೆ ನಿಷೇಧ ಕುರಿತು ರೂಪಿಸಿರುವ ಕಾನೂನಿನಲ್ಲಿ ನ್ಯೂನ್ಯತೆಗಳಿದ್ದು ಸರ್ಕಾರ ಸರಿಪಡಿಸುವ ಕೆಲಸ ಮಾಡಬೇಕು ಎಂದು ಶಾಸಕ ಎ. ಮಂಜು ಆಗ್ರಹಿಸಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಸೋಮವಾರ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರ್ಕಾರ ಎಲ್ಲದಕ್ಕೂ ಕಾನೂನು ರೂಪಿಸಿದೆ ಹೊರತು ಅದು ಸರಿಯಾಗಿ ಪಾಲನೆಯಾಗುತ್ತಿದೆಯೇ ಎನ್ನುವುದು ಯಕ್ಷ ಪ್ರಶ್ನೆಯಾಗಿದೆ. ಉಚಿತ ವಿದ್ಯುತ್ ಸೇರಿ ಪ್ಲಾಸ್ಟಿಕ್ ತಯಾರಿಕೆಗೆ ಅಗತ್ಯ ಸೌಲಭ್ಯಗಳನ್ನು ಸಹ ಸರ್ಕಾರವೇ ಒದಗಿಸುತ್ತಿದೆ. ಪ್ಲಾಸ್ಟಿಕ್ ಉತ್ಪಾದನೆಗೆ ಮಹತ್ವ ಕೊಟ್ಟು ತಪ್ಪೆಸಗುತ್ತಿದೆ. ಇನ್ನು ನಿಷೇಧ ಎಲ್ಲಿಂದ ಬರಬೇಕು. ಕಾನೂನಿನಲ್ಲಿ ಸಾಕಷ್ಟು ಲೋಪದೋಷಗಳು ಎದ್ದು ಕಾಣಿಸುತ್ತಿವೆ. ಇಷ್ಟಲ್ಲದೆ ರಾಜಕಾರಣಿಗಳು ಹಾಗೂ ಬಂಡವಾಳಶಾಹಿಗಳ ಮಾಲೀಕತ್ವದ ಕೈಗಾರಿಕೆಗಳಿವೆ. ಪ್ಲಾಸ್ಟಿಕ್ ಉತ್ಪಾದನೆಗೂ ಕೂಡ ಕಡಿವಾಣ ಹಾಕಿ ಅದರ ಬಳಕೆಗೆ ನಿಷೇಧ ಹೇರಬೇಕು. ಕಾನೂನು ಉಲ್ಲಂಘಿಸಿದವರಿಗೆ ಕಠಿಣ ಶಿಕ್ಷೆ ವಿಧಿಸುವಂತಾಗಬೇಕು. ಈ ಕುರಿತು ಸರ್ಕಾರದ ಕೆಲವು ತಪ್ಪು ನ್ಯೂನ್ಯತೆಗಳನ್ನು ಸರಿಪಡಿಸಬೇಕು ಎಂದು ಒತ್ತಾಯಿಸಿದರು.

ದೇಶವನ್ನು ಪರಿಸರ ಮಾಲೀನ್ಯ ಮುಕ್ತಗೊಳಿಸಲು ಎಲ್ಲರೂ ಕೈಜೋಡಿಸಿ ಪ್ಲಾಸ್ಟಿಕ್ ಬಳಕೆ ನಿಷೇಧಕ್ಕೆ ಪ್ರತಿಜ್ಞೆ ಮಾಡಬೇಕು. ಮುಂದಿನ ಪೀಳಿಗೆಗೂ ಪರಿಸರ ಸಂರಕ್ಷಣೆ ಮಾಡಬೇಕಾದರೆ ಪ್ರತಿಯೊಬ್ಬರೂ ಒಂದೊಂದು ಗಿಡ ನೆಟ್ಟು ಬೆಳೆಸಬೇಕು ಎಂದರು.

# ಪತ್ರಕರ್ತರಿಗೆ ಸಮಾಜ ಸರಿ ದಾರಿಗೆ ಕರೆದೊಯ್ಯುವ ಜವಾಬ್ದಾರಿ ಇದೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಮಾಧ್ಯಮ ಸಮಾಜದ ಕಣ್ಣಿದ್ದಂತೆ. ಪತ್ರಕರ್ತರು ಸಮಾಜವನ್ನು ತಿದ್ದುವ ಮೂಲಕ ಸಾರ್ವಜನಿಕರಿಗೆ ನ್ಯಾಯ ಕೊಡಿಸಬಹುದು ಎಂದು ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ನ್ಯಾಯಾಧೀಶೆ ಎಂ.ಎಸ್. ಶಶಿಕಲಾ ಹೇಳಿದರು.

ತಾಲ್ಲೂಕು ಕಾನೂನು ಸೇವಾ ಸಮಿತಿ, ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಕೀಲರ ಸಂಘ, ಪೊಲೀಸ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಆಯೋಜಿಸಿದ್ದ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೃಶ್ಯ ಮತ್ತು ಪತ್ರಿಕಾ ಮಾಧ್ಯಮ ಸಾರ್ವಜನಿಕರಲ್ಲಿ ನಂಬಿಕೆ ಉಳಿಸಿಕೊಂಡಿದೆ. ಪತ್ರಕರ್ತರ ವೃತ್ತಿ ಸವಾಲಿನ ವೃತ್ತಿಯಾಗಿದೆ. ಇಲ್ಲಿ ಬೆದರಿಕೆ ಕಷ್ಟ-ನಷ್ಟಗಳು ಹಾಗೂ ಚಾಕಚಕ್ಯತೆ ಹೊಂದಿರಬೇಕು. ಸುದ್ದಿಗಳನ್ನು ತ್ವರಿತವಾಗಿ ಕೊಡುವ ಸಂದರ್ಭ ಸತ್ಯಾಸತ್ಯತೆಯನ್ನು ಅರಿತು ಕೊಡಬೇಕು. ಸುದ್ದಿ ಕೊಡುವ ಬರದಲ್ಲಿ ಕೆಲವೊಂದು ಸಾರಿ ಸುಳ್ಳು ಸುದ್ದಿಗಳು ಹರಿದಾಡಿ ಸಮಾಜದ ಮೇಲೆ ದುಷ್ಪರಿಣಾಮಗಳು ಬೀರುತ್ತದೆ. ಆದ್ದರಿಂದ ಕೆಲವೊಂದು ಸಾರಿ ಸುದ್ದಿ ಕೊಡುವ ಮುನ್ನ ಚಿಂತಿಸಬೇಕು. ಅಲ್ಲದೆ ಸುದ್ದಿ ಬರೆಯುವ ಸಂದರ್ಭ ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡಬೇಕಾಗುತ್ತದೆ. ಸುದ್ದಿಗಳಲ್ಲಿ ಅವಾಚ್ಯ ಶಬ್ದಗಳನ್ನು ಬಳಸದೆ ಸಾರ್ವಜನಿಕರಿಗೆ ಹಾಗೂ ಸಮಾಜಕ್ಕೆ ಮನ ಮುಟ್ಟುವ ರೀತಿ ಬರೆದರೆ ಅದು ಸಾಕಷ್ಟು ಬದಲಾವಣೆಗೆ ಕಾರಣವಾಗುತ್ತದೆ. ಕೆಲವೊಂದು ಬಾರಿ ಒಬ್ಬ ವ್ಯಕ್ತಿಯ ವಿರುದ್ಧ ಕೆಟ್ಟ ಪದಗಳಿಂದ ಬಯಸಿದರೆ ಅದು ಕಾನೂನು ವ್ಯಾಪ್ತಿಯಲ್ಲಿ ತೊಂದರೆಯಾಗುತ್ತದೆ. ಆದ್ದರಿಂದ ಬರೆಯುವ ಆತುರದಲ್ಲಿ ಯೋಚನೆ ಮಾಡಬೇಕು. ಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳಲ್ಲಿ ಬರುವ ಸುದ್ದಿಗಳು ಸಮಾಜವನ್ನು ಬದಲಾಯಿಸುವಂತಿರಬೇಕು.

ಒಂದು ಘಟನೆ ಮತ್ತಷ್ಟು ನಕರಾತ್ಮಕ ಘಟನೆಗಳಿಗೆ ಕಾರಣವಾಗಬಾರದು. ಆ ರೀತಿಯಲ್ಲಿ ಪದ ಬಳಕೆಯನ್ನುಸಮಯೋಚಿತವಾಗಿ ಬಳಸಿ ಬರೆಯಬೇಕು. ಅವಸರ ಅವಸರವಾಗಿ ಬರೆಯದೆ ಏನು ನಡೆದಿದೆ ಎಂಬ ಸತ್ಯವನ್ನು ತಿಳಿದು ಬರೆಯಬೇಕು ಎಂದರು.

ಪ್ರತಿ ಪತ್ರಕರ್ತರು ತಮ್ಮ ಕುಟುಂಬಕ್ಕೆ ಸಮಯ ನೀಡಬೇಕು. ಸಮಾಜಮುಖಿ ಕೆಲಸದ ಜೊತೆಗೆ ಕುಟುಂಬದ ನಿರ್ವಹಣೆ ಮುಖ್ಯ. ಆಗಮಾತ್ರ ವೃತ್ತಿ ಮತ್ತು ಕುಟುಂಬ ಎರಡಕ್ಕೂ ಸಮಾನ ನ್ಯಾಯ ದೊರಕಿಸಿಕೊಟ್ಟಂತಾಗುತ್ತದೆ ಎಂದು ತಿಳಿಸಿದರು.

ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಬಿ. ಶಿವರಾಜ್ ಮಾತನಾಡಿ, ಪತ್ರಕರ್ತರು ದಿನನಿತ್ಯ ಮಾನಸಿಕ ಒತ್ತಡದ ನಡುವೆ ಕೆಲಸ ಮಾಡುತ್ತಿದ್ದಾರೆ. ಅನಾರೋಗ್ಯಕ್ಕೆ ತುತ್ತಾದಾಗ ಅವರಿಗೆ ಸಹಾಯ ನೀಡಲು ಸಂಘದಲ್ಲಿ ಆರೋಗ್ಯ ನಿಧಿ ಪ್ರಾರಂಭಿಸಿದ್ದು ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಎರಡು ಲಕ್ಷ ರೂ. ಹಾಗೂ ಎಚ್‌ಡಿಸಿಸಿ ಬ್ಯಾಂಕ್‌ನ ನಿರ್ದೇಶಕರಾದ ಎಂ.ಎ. ನಾಗರಾಜ್ ಅವರು 1 ಲಕ್ಷ ರೂ. ಮತ್ತು ಪತ್ರಿಕಾಗೋಷ್ಠಿಗಳಿಂದ ಬಂದ ಒಂದು ಲಕ್ಷ ಸೇರಿ 5 ಲಕ್ಷ ರೂ. ಹಣ ಸಂಗ್ರಹಿಸಲಾಗಿದೆ. ಈ ಹಣವನ್ನು ಬೇರೆ ಕಾರ್ಯಕ್ರಮಗಳಿಗೆ ಬಳಸದೆ ಪತ್ರಕರ್ತರ ಆರೋಗ್ಯಕ್ಕಾಗಿ ಮೀಸಲಿಟ್ಟಿದೆ ಎಂದು ತಿಳಿಸಿದರು.

ಸಿಪಿಐ ರೇವಣ್ಣ ಮಾತನಾಡಿ, ಪತ್ರಕರ್ತರು ವಾಸ್ತವವಾಗಿ ನೈಜ ಸುದ್ದಿ ಬಿತ್ತರಿಸಿದಾಗ ನಮ್ಮ ಕರ್ತವ್ಯ ಎಚ್ಚರಿಸಿದಂತಾಗುತ್ತದೆ. ಜತೆಗೆ ಟಿಆರ್‌ಪಿ ಭರದಲ್ಲಿ ಯೂಟ್ಯೂಬ್ ಚಾನೆಲ್ ಕಡಿವಾಣ ಅತ್ಯವಶ್ಯ. ಇದೇ ಅದು ಕಾನೂನು ರೀತಿ ಶೀಘ್ರ ಜಾರಿಯಾಗಬೇಕು ಎಂದು ತಿಳಿಸಿದರು.

ಪತ್ರಕರ್ತರ ಸಂಘದ ಅಧ್ಯಕ್ಷ ರಘುನಾಥ್, ವಕೀಲರ ಸಂಘದ ಅಧ್ಯಕ್ಷ ಸಿ.ಎಂ. ಪೃಥ್ವಿ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಪುಟ್ಟಸ್ವಾಮಿಗೌಡ, ಪತ್ರಕರ್ತರಾದ ಜಗದೀಶ್, ಹೆಬ್ಬಾಳು ಹಾಲಪ್ಪ, ಎನ್. ಅನಂತು, ಬಿ.ಎಲ್.ಲಕ್ಷ್ಮಣ್, ಎಂ.ಸಿ. ಕುಮಾರ್, ಬಿ.ಎನ್. ಗಣೇಶ್, ವಿಜಯ್ ಕುಮಾರ್, ಕೇಬಲ್ ರಮೇಶ್, ರಾಘವೇಂದ್ರ ಹೊಳ್ಳ, ಪೇಂಟ್ ರವಿ ಇತರರಿದ್ದರು.

# ಸ್ಕೌಟ್ಸ್- ಗೈಡ್ಸ್ ಧ್ಯೇಯವೇ ಸಮಾಜ ಸೇವೆ: ಎಲ್.ಟಿ. ಲೋಕೇಶ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಇರುವುದೇ ಸಮುದಾಯದ ಸೇವೆಗಾಗಿ. ಜಗತ್ತಿನ ನೂರಾರು ದೇಶಗಳಲ್ಲಿ ಸಾಮಾಜಿಕ ಸೇವೆಯಲ್ಲಿ ನಿರಂತರವಾಗಿ ನಮ್ಮ ಸಂಸ್ಥೆ ತೊಡಗಿಸಿಕೊಂಡು ಜನಮುಖಿ ಕಾರ್ಯವನ್ನು ಮಾಡುತ್ತಿದೆ ಎಂದು ಭಾರತ್ ಸ್ಕೌಟ್ಸ್-ಗೈಡ್ಸ್ ರಾಜ್ಯ ಸಹ ಕಾರ್ಯದರ್ಶಿ ಹಾಗೂ ಹಾಸನಾಂಬ ಮತ್ತು ಸಿದ್ದೇಶ್ವರ ಜಾತ್ರಾ ಮಹೋತ್ಸವ ಸೇವಾ ಶಿಬಿರದ ಮುಖ್ಯ ನಾಯಕ ಎಲ್.ಟಿ. ಲೋಕೇಶ್ ಅಭಿಪ್ರಾಯಪಟ್ಟರು.

ನಗರದ ಜೈನ ಭವನದಲ್ಲಿ ಮೊದಲ ಬ್ಯಾಚ್ ನಲ್ಲಿ ವಿವಿಧ ಜಿಲ್ಲೆಗಳಿಂದ ಸೇವಾ ಶಿಬಿರಕ್ಕೆ ಆಗಮಿಸಿದ 750ಕ್ಕೂ ಹೆಚ್ಚು ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ ಜಿಲ್ಲಾಡಳಿತದ ಸಹಕಾರದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಸಹ ರಾಜ್ಯ ಮಟ್ಟದ ಸೇವಾ ಶಿಬಿರವನ್ನು ಹಮ್ಮಿಕೊಂಡಿದ್ದು ನಲವತ್ತಕ್ಕೂ ಹೆಚ್ಚಿನ ಕೇಂದ್ರಗಳಲ್ಲಿ ದಿನಕ್ಕೆ ಎರಡು ಪಾಳೆಯದಂತೆ ನಮ್ಮ ಮಕ್ಕಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರು. ಸರದಿ ಸಾಲಿನ ಶಿಸ್ತನ್ನು ಕಾಪಾಡುವುದು, ಬಾಯಾರಿದವರಿಗೆ ನೀರಿನ ಪೂರೈಕೆ ಮಾಡುವುದು, ವಯೋವೃದ್ಧರನ್ನು ವ್ಹೀಲ್ ಚೇರಿನಲ್ಲಿ ಕರೆದುಕೊಂಡು ಹೋಗಿ ದರ್ಶನ ಮಾಡಿಸುವುದು, ಸ್ವಚ್ಛತಾ ಕಾರ್ಯ ಮಾಡುವುದು ಹೀಗೆ ಅನೇಕ ಕಡೆಗಳಲ್ಲಿ ಸೇವಾ ನಿರತರಾಗಿದ್ದಾರೆ. ಇದೊಂದು ನಮ್ಮ ಸ್ಕೌಟ್ಸ್ ಅಂಡ್ ಗೈಡ್ಸ್ ಮಕ್ಕಳಿಗೆ ಪುಣ್ಯದ ಕಾರ್ಯ. ಹಾಸನಾಂಬೆಯ ಸೇವೆ ನಮ್ಮಗಳ ಸೌಭಾಗ್ಯ. ಎಲ್ಲರಿಗೂ ಈ ಅವಕಾಶ ದೊರೆಯುವುದಿಲ್ಲ. ಸಿಕ್ಕ ಅವಕಾಶವನ್ನು ಶ್ರದ್ಧೆಯಿಂದ ನಿರ್ವಹಿಸಿ ನಮ್ಮ ಸಂಸ್ಥೆ ಹಾಗೂ ಜಿಲ್ಲಾಡಳಿತಕ್ಕೆ ಕೀರ್ತಿ ತರಬೇಕಿದೆ ಎಂದರು.

ಈ ಸಂದರ್ಭದಲ್ಲಿ ರೋವರ್ ರೇಂಜರ್ ವಿಭಾಗದ ಹೆಡ್ ಕ್ವಾರ್ಟರ್ ಕಮಿಷನರ್ ಡಾ. ಜಿ.ಡಿ.ನಾರಾಯಣ, ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ. ಪ್ರಿಯಾಂಕ, ಬೆಂಗಳೂರು ಎ.ಎಸ್.ಒ.ಸಿ. ನಿತಿನ್ ಅಮೀನ್, ಜಿಲ್ಲಾ ಖಜಾಂಚಿ ಆರ್.ಎಸ್.ರಮೇಶ್, ಏಕಲವ್ಯ ರೋವರ್ ನಾಯಕ ಆರ್.ಜಿ. ಗಿರೀಶ್ ಸೇರಿದಂತೆ ಜಿಲ್ಲಾ ಪದಾಧಿಕಾರಿಗಳು, ವಿವಿಧ ತಾಲ್ಲೂಕು ಕಾರ್ಯದರ್ಶಿಗಳು, ವಿವಿಧ ಜಿಲ್ಲೆಯಿಂದ ಆಗಮಿಸಿದ್ದ ರೋವರ್ ಲೀಡರ್, ರೇಂಜರ್ ಲೀಡರ್ಸ್, ಕಾರ್ಯನಿರತ ರೋವರ್ಸ್, ರೇಂಜರ್ಸ್ ಉಪಸ್ಥಿತರಿದ್ದರು.

# ಪೌರಾಣಿಕ ನಾಟಕ ಸಂಸ್ಕೃತಿ ಮುಂದಿನ ಪೀಳಿಗೆಗೂ ಪರಿಚಯವಾಗಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಹಿರಿಯ ಹಾಗು ಕಿರಿಯ ಕಲಾವಿದರನ್ನು ಒಗ್ಗೂಡಿಸಿ ಪೌರಾಣಿಕ ನಾಟಕಗಳ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೂ ಪರಿಚಯಿಸುವ ಕೆಲಸ ಮಾಡುತ್ತೇನೆ ಎಂದು ಜಿಲ್ಲಾ ಕಲಾವಿದರ ಹಿತ ರಕ್ಷಣಾ ಸಮಿತಿ ಅಧ್ಯಕ್ಷ ಬಿದರೆ ರವಿ ಹೇಳಿದರು.

ಜಿಲ್ಲಾ ಕಲಾವಿದರ ರೈತ ರಕ್ಷಣಾ ಸಮಿತಿ ವತಿಯಿಂದ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸರ್ವ ಸದಸ್ಯರ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲಾವಿದರಿಗೆ ತಾಲಿಮು ಕೊಠಡಿ ಅತ್ಯವಶ್ಯಕವಾಗಿದೆ.

ಎಲ್ಲಾ ಸದಸ್ಯರ ಸಹಕಾರ ಪಡೆದು ಮುಂದಿನ ದಿನಗಳಲ್ಲಿ ಬೇಡಿಕೆ ಈಡೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಂಘದ ಬೆಳವಣಿಗೆಗೆ ಸರ್ಕಾರದಿಂದ ಹೆಚ್ಚಿನ ಅನುದಾನ ತರಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ನುರಿತ ಕಲಾವಿದರಿಂದ ಯುವ ತರಬೇತಿ ನೀಡುವ ಮೂಲಕ ಹೊಸ ಪ್ರತಿಭೆಗಳ ಗುರುತಿಸಿ ಅವರಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು. ಗ್ರಾಮೀಣ ಭಾಗದಲ್ಲಿ ಪೌರಾಣಿಕ ನಾಟಕಗಳಿಗೆ ಒತ್ತು ನೀಡಲಾಗುವುದು. ಹಿಂದೆ ಸಹಕಾರ ನೀಡಿದಂತೆ ತಾವೆಲ್ಲರೂ ಮುಂದೆಯೂ ಇದೇ ರೀತಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಕಲಾವಿದರಿಗಾಗಿ ತಾಲಿಮು ಕೊಠಡಿ, ತಾಲ್ಲೂಕು ಮಟ್ಟದ ಸಮಿತಿ, ಸಂಘದ ವತಿಯಿಂದ ಆರೋಗ್ಯ ಮೇಳ, ಅಕಾಲಿಕ ಮರಣ ಹೊಂದಿದ ಕಲಾವಿದರ ಕುಟುಂಬಗಳಿಗೆ ನೀಡುತ್ತಿದ್ದ 5 ಸಾವಿರ ರೂ. ಪರಿಹಾರವನ್ನು 10 ಸಾವಿರ ರೂ.ಗೆ ಹೆಚ್ಚಿಸಬೇಕು. ಯುವ ಕಲಾವಿದರನ್ನು ಗುರುತಿಸಿ ಅವರಿಗೆ ಪ್ರೋತ್ಸಾಹ ನೀಡುವಂತಹ ಕಾರ್ಯಕ್ರಮ ಆಯೋಜಿಸಬೇಕೆಂಬ ಸಲಹೆ ಬಂದಿದ್ದು ಗೌರವ ಪೂರ್ವಕವಾಗಿ ಸ್ವೀಕರಿಸಿದ್ದೇನೆ ಎಂದು ತಿಳಿಸಿದರು.

ಇತ್ತೀಚೆಗೆ ನಿಧನರಾದ ಸಾಹಿತಿ ಡಾ. ಎಸ್.ಎಲ್.ಭೈರಪ್ಪ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಹೆಚ್. ಎಂ.ಶಿವಣ್ಣ ಅವರಿಗೆ ಸಂತಾಪ ಸೂಚಿಸಲಾಯಿತು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ಮಕ್ಕಳಿಗೆ ಹಾಗು 40ಕ್ಕೂ ಹೆಚ್ಚು ಹಿರಿಯ ಕಲಾವಿದರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಶ್ರೀಕಂಠಪ್ಪ, ಸೋಮಶೇಖರ್, ಗೌರವ ಅಧ್ಯಕ್ಷ ಶೇಖರಪ್ಪ, ಕಾರ್ಯದರ್ಶಿ ವೇದಾ ಹಾಸನ, ಕಾರ್ಯಾಧ್ಯಕ್ಷ ನಾಗಮೋಹನ್, ಕಾನೂನು ಸಲಹೆಗಾರ ಮಹೇಂದ್ರ, ಹಿರಿಯ ಸಲಹೆಗಾರ ಕೆ.ಕೆ.ರಂಗಸ್ವಾಮಿ, ಸಂಘಟನಾ ಕಾರ್ಯದರ್ಶಿ ಪ್ರದೀಪ್ ಗವೇನಹಳ್ಳಿ, ಸಹಾಯಕ ಕಾರ್ಯದರ್ಶಿ ಶಶಿಕಾಂತ್, ಸಂಚಾಲಕ ನಾಗರಾಜ್ ಇತರರಿದ್ದರು.

# ಸಹಕಾರ ಕ್ಷೇತ್ರದಿಂದ ರೈತರ ಬದುಕು ಸದೃಢ: ಶಾಸಕ ಬಾಲಕೃಷ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಕೇವಲ 10 ಗುಂಟೆ ಕೃಷಿ ಜಮೀನು ಹೊಂದಿರುವ ರೈತನಿಗೂ ಸಹ ಸಾಲದ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ದಿಡಗ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಷೇರುದಾರ ಸದಸ್ಯರಿಗೆ ಸಾಲದ ಚೆಕ್ ವಿತರಿಸಿ ಮಾತನಾಡಿ, ರೈತರ ಬದುಕು ಹಸನುಗೊಂಡು ಸದೃಢಗೊಳ್ಳುವಲ್ಲಿ ಸಹಕಾರಿ ಕ್ಷೇತ್ರ ಪ್ರಮುಖ ಪಾತ್ರ ವಹಿಸುತ್ತಿದೆ ಎಂದರು.

ದಿಡಗ ಸಂಘದಿಂದ ಪ್ರಸ್ತುತ ಸಾಲಿನಲ್ಲಿ 300 ಷೇರುದಾರ ರೈತ ಸದಸ್ಯರಿಗೆ ಶೂನ್ಯ ಬಡ್ಡಿ ದರದಲ್ಲಿ 96 ಲಕ್ಷ ರೂ. ಸಾಲ ನೀಡಲಾಗಿದೆ. ಅಲ್ಲದೆ ಈ ಮೊದಲು 50ಕ್ಕೂ ಹೆಚ್ಚು ಸ್ವಸಹಾಯ ಸಂಘಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸುಮಾರು 2 ಕೋಟಿ ರೂ.ಗೂ ಹೆಚ್ಚು ಸಾಲ ಸೌಲಭ್ಯ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ನಾವು ಎಂದಿಗೂ ಕೈಕಟ್ಟಿ ಕೂರುವವರಲ್ಲ. ತಾಲ್ಲೂಕನ್ನು ಸಂಪೂರ್ಣ ನೀರಾವರಿಗೊಳಿಸುವ ಆಶಯ ಹೊಂದಿದ್ದು ಪರಿಶ್ರಮದ ಫಲವಾಗಿ ಕಳೆದ 2-3 ವರ್ಷಗಳಿಂದ ಹಿರೀಸಾವೆ-ಜುಟ್ಟನಹಳ್ಳಿ, ನುಗ್ಗೇಹಳ್ಳಿ, ಕಲ್ಲೇಸೋಮನಹಳ್ಳಿ, ಸಂತೇಶಿವರ ಹಾಗೂ ನವಿಲೆ ಏತನೀರಾವರಿ ಯೋಜನೆಗಳ ಮೂಲಕ 150ಕ್ಕೂ ಹೆಚ್ಚು ಕೆರೆ-ಕಟ್ಟೆಗಳಿಗೆ ನೀರು ತುಂಬಿಸುವ ಕಾರ್ಯ ಮಾಡಲಾಗಿದೆ ಎಂದರು. ಅದರಿಂದ ವ್ಯಾಪ್ತಿಯಲ್ಲಿ ಅಂತರ್ಜಲ ಚೇತರಿಕೆ ಕಂಡಿದ್ದು ಕೊಳವೆ ಬಾವಿಗಳಲ್ಲಿ ಮೇಲೆಯೇ ನೀರು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಾಗುತ್ತಿದೆ. ಇದರಿಂದ ಕೃಷಿ ಚಟುವಟಿಕೆ ಚುರುಕುಗೊಂಡಿದ್ದು ಅಲ್ಲದೆ ಜನ-ಜಾನುವಾರುಗಳು ಕುಡಿಯಲು ನೀರು ದೊರೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರ ಕನಸಿನ ಯೋಜನೆಯಾದ ತೋಟಿಕೆರೆ ಏತನೀರಾವರಿ ಯೋಜನೆಯ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿದೆ. ಈ ಹಂಗಾಮಿನ ಅಂತಿಮ ವೇಳೆಯಷ್ಟರಲ್ಲಿ ಪ್ರಾಯೋಗಿಕವಾಗಿ ತೋಟಿ ವ್ಯಾಪ್ತಿಯ ಕೆರೆಗಳಿಗೆ ನೀರು ಹರಿಸುವ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಅಲ್ಲದೆ ದಿಡಗ ಏತನೀರಾರಿ ಯೋಜನೆಯನ್ನು ಕೈಗೆತ್ತಿಕೊಂಡಿದ್ದು ಪ್ರಸ್ತಾವನೆಯ ಹಂತದಲ್ಲಿದೆ. ರಾಜ್ಯ ಸರ್ಕಾರ ಮನಸ್ಸು ಮಾಡಿ ಅನುಮೋದನೆ ನೀಡಿ ಅಂದುಕೊಂಡಂತೆಯೇ ಆದರೆ ಮುಂದಿನ ವರ್ಷದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

ಸಂಘದ ಅಧ್ಯಕ್ಷ ನರಿಹಳ್ಳಿ ತಾತೇಗೌಡ ಮಾತನಾಡಿ, ಶಾಸಕ ಸಿ.ಎನ್.ಬಾಲಕೃಷ್ಣ ಅವರ ಮಾರ್ಗದರ್ಶನದಲ್ಲಿ ಸಂಘದ ನಿರ್ದೇಶಕರ ಸಹಕಾರ ಪಡೆದು ಸಂಘದ ಹಾಗೂ ಷೇರುದಾರ ಸಸಸ್ಯರ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಪುಟ್ಟರಾಜು, ಎಂ.ಆರ್. ವಾಸು, ಎಪಿಎಂಸಿ ಮಾಜಿ ಅಧ್ಯಕ್ಷ ರಘುರಾಮ್, ಸಹಕಾರ ಸಕ್ಕರೆ ಕಾರ್ಖಾನೆಯ ಮಾಜಿ ಅಧ್ಯಕ್ಷ ತೋಟಿ ಜಯರಾಮ್, ಸಂಘದ ಮಾಜಿ ಅಧ್ಯಕ್ಷ ಶ್ರೀಕಂಠಪ್ಪ, ನಿರ್ದೇಶಕರಾದ ಮಲ್ಲೇಗೌಡ, ಹೆಚ್.ಕೆ.ಯೋಗೇಶ್, ಬಾಲಕೃಷ್ಣ, ಹೆಚ್.ಕೆ.ಮಹೇಶ್, ಲೋಕೇಶ್, ವೆಂಕಟೇಶ್, ತುಮಕೂರು ಮಧು, ಸುಮಿತ್ರಮ್ಮ, ತುಳಸಿ, ನಾಮಿನಿ ಅಭಿಲಾಷ್, ಕಾರ್ಯನಿರ್ವಹಕಾಧಿಕಾರಿ ನಿಂಗಮ್ಮ, ಸಿಬ್ಬಂದಿ ವರ್ಗ, ಷೇರುದಾರ ಸದಸ್ಯರು ಹಾಗೂ ಇತರರು ಇದ್ದರು.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-14

**1066:** ಇಂಗ್ಲೆಂಡ್‌ನಲ್ಲಿ ಪ್ರಸಿದ್ಧ ಹ್ಯಾಸ್ಟಿಂಗ್ಸ್ ಯುದ್ಧ ನಡೆಯಿತು. ವಿಲಿಯಂ ದಿ ಕಾಂಕ್ವರರ್ ಇಂಗ್ಲೆಂಡ್‌ನ ರಾಜ ಹರೋಲ್ಡ್ ಅವರನ್ನು ಸೋಲಿಸಿ ನಾರ್ಮನ್ ಆಳ್ವಿಕೆಗೆ ನಾಂದಿ ಹಾಡಿದರು.

**1947:** ಅಮೆರಿಕದ ಪೈಲಟ್ ಚಕ್ ಯೇಗರ್ ಧ್ವನಿಗತಿಯನ್ನು ಮುರಿದ ಮೊದಲ ವ್ಯಕ್ತಿಯಾದರು.

**1964:** ನಾಗರಿಕ ಹಕ್ಕುಗಳ ಹೋರಾಟಗಾರ ಮಾರ್ಟಿನ್ ಲೂಥರ್ ಕಿಂಗ್ ಜೂನಿಯರ್ ಅವರಿಗೆ ಶಾಂತಿಯ ನೊಬೆಲ್ ಪ್ರಶಸ್ತಿ ದೊರೆಯಿತು.

**2012:** ಆಸ್ಟ್ರಿಯನ್ ಸಾಹಸಿ ಫೆಲಿಕ್ಸ್ ಬೌಮ್‌ಗಾಟ್ನರ್ ಅಂತರಿಕ್ಷದ ಅಂಚಿನಿಂದ ಪ್ಯಾರಶೂಟ್ ಜಿಗಿತ ಮಾಡಿ ಧ್ವನಿಗತಿಯನ್ನು ಮೀರಿದ ಮೊದಲ ಮಾನವನಾದರು.

### ಜನನ

**1890:** ದ್ವಿತೀಯ ಮಹಾಯುದ್ಧದ ಪ್ರಸಿದ್ಧ ಅಮೆರಿಕಾದ ಜನರಲ್ ಡ್ವೈಟ್ ಡಿ. ಐಸೆನ್‌ಹೋವರ್

**1906:** ಪ್ರಸಿದ್ಧ ವಿಜ್ಞಾನಿ ಹ್ಯಾನಾ ಅರೆಂಟ್, ರಾಜಕೀಯ ತತ್ತ್ವಜ್ಞೆ

**1950:** ಕ್ಯಾಥ್ಲೀನ್ ಹ್ಯಾನ್ನಾ, ಅಮೆರಿಕಾದ ಸಂಗೀತಗಾರ್ತಿ ಹಾಗೂ ಮಹಿಳಾ ಹಕ್ಕುಗಳ ಹೋರಾಟಗಾರ್ತಿ

### ಮರಣ

**1933:** ಜರ್ಮನಿಯ ಪ್ರಸಿದ್ಧ ಬರಹಗಾರ ಅಡೋಲ್ಫ್ ಲೂಸ್ ನಿಧನ

**1990:** ಲಿಯೋನಾರ್ಡ್ ಬರ್ನ್‌ಸ್ಟೆನ್, ವಿಶ್ವಪ್ರಸಿದ್ಧ ಸಂಗೀತ ಸಂಯೋಜಕ

# ಸೆರೆ ಸಿಕ್ಕ ಕಾಡುಕೋಣ ಸ್ಥಳಾಂತರ ಮಧ್ಯೆ ಸಾವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಪಟ್ಟಣದಲ್ಲಿ ಮೂರು ಬಾರಿ ಅರವಳಿಕೆ ಚುಚ್ಚುಮದ್ದು ನೀಡಿ ಸೆರೆ ಹಿಡಿಯಲಾಗಿದ್ದ ಕಾಡುಕೋಣ ಅರಣ್ಯ ಪ್ರದೇಶಕ್ಕೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದೆ.

ಅಂದಾಜು ನಾಲ್ಕು ವರ್ಷದ ಕಾಡುಕೋಣ ಪಟ್ಟಣದ ವಿದ್ಯಾನಗರದಲ್ಲಿ ಸಾರ್ವಜನಿಕರ ಮೇಲೆ ದಾಳಿ ನಡೆಸಿತ್ತು. ಶಾಂತಮ್ಮ ಎಂಬುವವರ ಮೇಲೆ ಎರಗಿ ಗಂಭೀರ ಗಾಯಗೊಳಿಸಿದ್ದು ಮಾತ್ರವಲ್ಲದೆ ಒಂದು ಕಾರು ಹಾಗೂ ಮೂರು ಬೈಕ್‌ಗಳನ್ನು ಜಖಂಗೊಳಿಸಿತ್ತು. ಕಾಡುಕೋಣದ ಉಪಟಳ ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ಉಪ ಸಂರಕ್ಷಣಾಧಿಕಾರಿ ಸೌರಭ್‌ಕುಮಾರ್ ಹಾಗೂ ನೌಕರರು ಇಡೀ ದಿನ ಕಾರ್ಯಾಚರಣೆ ಸಂಜೆ ವೇಳೆಗೆ ಸೆರೆ ಹಿಡಿದಿದ್ದರು. ಆದರೆ ಮೂರು ಬಾರಿ ಅರವಳಿಕೆ ಚುಚ್ಚುಮದ್ದು ನೀಡಿದ್ದರಿಂದ ನಿತ್ರಾಣಗೊಂಡಿದ್ದ ಕಾಡುಕೋಣ ಉಸಿರಾಟ ಸಮಸ್ಯೆಯಿಂದ ಮೃತಪಟ್ಟಿದೆ. ವಿದ್ಯಾನಗರದ ಮಂಟಿಯಲ್ಲಿ ಹಂದಿ ಜೋಗಿ ಸಮುದಾಯದ ಶಾಂತಮ್ಮ ಅವರು ಹಂದಿ ಮೇಯಿಸಲು ಬಂದಿದ್ದಾಗ ಹಂದಿಗಳಿರುವ ಜಾಗಕ್ಕೆ ಕಾಡುಕೋಣ ಬಂದಿತ್ತು. ಎಮ್ಮೆ ಎಂದು ತಿಳಿದು ಅದನ್ನು ಓಡಿಸಲು ಮುಂದಾದಾಗ ಅವರ ಮೇಲೆ ದಾಳಿ ನಡೆಸಿತ್ತು. ಮಹಿಳೆಯ ಎಡಗೈ ಮುರಿದಿದ್ದು ಅವರನ್ನು ಹಿಮ್ಸ್‌ಗೆ ದಾಖಲಿಸಲಾಗಿದೆ.

ನಂತರ ಮುಳ್ಳಿನ ಪೊದೆಯೊಳಗೆ ಸೇರಿಕೊಂಡಿದ್ದ ಕಾಡುಕೋಣವನ್ನು ಹೊರಗೆ ಬರದಂತೆ ಅರಣ್ಯ ಇಲಾಖೆ ಸಿಬ್ಬಂದಿ ಕ್ರಮ ವಹಿಸಿದ್ದರು. ಮಧ್ಯಾಹ್ನದ ಹೊತ್ತಿಗೆ ಎಲ್ಲಾ ಸಿದ್ಧತೆ ಮಾಡಿಕೊಂಡ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದರು.

ಮೊದಲ ಅರವಳಿಕೆ ಚುಚ್ಚುಮದ್ದಿಗೆ ಆಕ್ರೋಶಗೊಂಡ ಕಾಡುಕೊಣ ಮತ್ತೆ ಆರ್ಭಟ ಶುರು ಮಾಡಿದ್ದರಿಂದ ಮತ್ತೊಂದು ಡೋಸ್ ನೀಡಲಾಯಿತು. ಅದರಿಂದ ನಿತ್ರಾಣಗೊಂಡು ಕೆಳಗೆ ಬಿದ್ದಿತು. ಕ್ರೇನ್ ಮೂಲಕ ಲಾರಿಗೆ ಹಾಕುತ್ತಿದ್ದಂತೆ ಎಚ್ಚರಗೊಂಡು ಏಕಾಏಕಿ ಲಾರಿಯಿಂದ ಜಿಗಿದು ಪಟ್ಟಣದೊಳಗೆ ಓಡುವ ಪ್ರಯತ್ನ ಮಾಡಿತಾದರೂ ಮತ್ತೆ ಅರವಳಿಕೆ ಚುಚ್ಚುಮದ್ದು ನೀಡಿ ಸುಮ್ಮನಾಗಿಸಲಾಯಿತು. ಕಾಡುಕೋಣಗಳು ಹೆಚ್ಚಾಗಿ ವಾಸಿಸುವ ಪಶ್ಚಿಮಘಟ್ಟ ಅರಣ್ಯಕ್ಕೆ ಬಿಡಲು ಹೋಗಲಾಯಿತಾದರೂ ಅಸ್ವಸ್ಥಗೊಂಡು ಮೃತಪಟ್ಟಿದೆ. ಮರಣೋತ್ತರ ಪರೀಕ್ಷೆ ಬಳಿಕ ಅಂತ್ಯಕ್ರಿಯೆ ನೆರವೇರಿಸಲಾಯಿತು.

# ಕೆ. ಹೊಸಕೋಟೆ ಆಸ್ಪತ್ರೆಗೆ ವೈದ್ಯರ ನೇಮಿಸಲು ಒತ್ತಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಆಲೂರು: ಕೆ. ಹೊಸಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕೂಡಲೇ ಶಾಶ್ವತ ವೈದ್ಯರನ್ನು ನೇಮಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಕೆ. ಹೊಸಕೋಟೆ ಹೋಬಳಿ ವ್ಯಾಪ್ತಿಗೊಳಪಡುವ ಹತ್ತು ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಆಸ್ಪತ್ರೆಗಳಿಲ್ಲ. ಸರಕಾರಿ ಆಸ್ಪತ್ರೆಗಳಿರುವ ರಾಯರಕೊಪ್ಪಲು, ಬಾಳ್ಳುಪೇಟೆ, ಯಸಳೂರು, ಹೆತ್ತೂರು, ಶುಕ್ರವಾರಸಂತೆ ಸೇರಿದಂತೆ ಯಾವುದೆ ಕೇಂದ್ರಕ್ಕೆ ರಾತ್ರಿ ವೇಳೆಹೋಗಬೇಕಾದರೂ ಕನಿಷ್ಟ ಹನ್ನೆರಡರಿಂದ ಹದಿನೈದು ಕಿ.ಮೀ. ಸಾಗಿ ಚಿಕಿತ್ಸೆ ಪಡೆಯಬೇಕಾಗಿದೆ. ಕೆ. ಹೊಸಕೋಟೆಯಲ್ಲಿ ಸುಸಜ್ಜಿತ ಆಸ್ಪತ್ರೆಯಿದೆ, ಪ್ರಯೋಗಾಲಯ ಇದೆಯಾದರೂ ಪರೀಕ್ಷಕರ ಕೊರತೆ ಇದೆ.

ಒಳರೋಗಿಗಳನ್ನು ದಾಖಲಿಸಿಕೊಳ್ಳುವ ಅವಕಾಶವಿದ್ದರೂ ವ್ಯವಸ್ಥೆಯಿಲ್ಲ. ಸುಸಜ್ಜಿತ ವೈದ್ಯರ ವಸತಿ ನಿಲಯವಿದೆ.

ಹಲವು ತಿಂಗಳಿನಿಂದ ಹಗಲು ವೇಳೆಯಲ್ಲಿ ವೈದ್ಯರು ಆಸ್ಪತ್ರೆಗೆ ಬಂದು ಹೋಗುತ್ತಾರೆ. ರಾತ್ರಿ ವೇಳೆಯಲ್ಲಿ ವೈದ್ಯರು ಸಿಗುದ ಕಾರಣದಿಂದ ಯಾವುದೆ ತುರ್ತು ಚಿಕಿತ್ಸೆ ದೊರಕದೆ ತೀವ್ರ ತೊಂದರೆಯಾಗಿದೆ. ನಿರಂತರವಾಗಿ ಕೇಂದ್ರದಲ್ಲಿ ವಾಸ್ತವ್ಯ ಹೂಡಿ ಸೇವೆ ಮಾಡುವ ವೈದ್ಯರನ್ನು ನೇಮಿಸಬೇಕೆಂದು ಹರಿಹಳ್ಳಿ ಸತ್ಯನಾರಾಯಾಣ ಮನವಿ ಮಾಡಿಕೊಂಡಿದ್ದಾರೆ.

ಶೀಘ್ರದಲ್ಲಿ ವೈದ್ಯರನ್ನು ನೇಮಿಸದಿದ್ದರೆ ತಾಲ್ಲೂಕು ವೈದ್ಯಾಧಿಕಾರಿಗಳು ಮತ್ತು ಜಿಲ್ಲಾ ಆರೋಗ್ಯ ಅಧಿಕಾರಿಗಳನ್ನು ಗ್ರಾಮಸ್ಥರೊಂದಿಗೆ ಭೇಟಿ ಮಾಡಿ ಮನವಿ ಮಾಡಲಾಗುವುದು ಎಂದಿದ್ದಾರೆ

ವೈದ್ಯರ ಕೊರತೆ ಇದೆ. ಸುತ್ತಮುತ್ತಲಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಮೂವರು ವೈದ್ಯರು ವಾರದಲ್ಲಿ ತಲಾ ಎರಡು ದಿನ ಕೆ. ಹೊಸಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೇವೆ ಮಾಡುತ್ತಿದ್ದಾರೆ. ಆ ವೈದ್ಯರೂ ಸಹ ಡಬಲ್ ಡ್ಯೂಟಿ ಮಾಡುತ್ತಿದ್ದಾರೆ. ಸದ್ಯದಲ್ಲೆ ಸರ್ಕಾರ ವೈದ್ಯರ ಕೊರತೆ ನೀಗಿಸುವ ವಿಶ್ವಾಸವಿದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್‌ಫಾತಿಮ ಪ್ರತಿಕ್ರಿಯಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248